ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಿನಾಂಕ: 20-09-2019ರ ಆದೇಶದಲ್ಲಿ ಮಾನ್ಯ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ"ಯಡಿ ಕೈಗೊಳ್ಳಲು ಉದ್ದೇಶಿಸಿರುವ "Construction of Convention Hall infront of Rangamandira at Attur layout in ward no-03" ಕಾಮಗಾರಿಯ (ಅನುಬಂಧ-6ರ ಕ್ರಮ ಸಂಖ್ಯೆ: 53) ರೂ.50.00 ಲಕ್ಷಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019.

2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಮು.ಆ/ಪಿ.ಆರ್/3476/2021-22, ದಿನಾಂಕ: 15-12-2021.

3. ದಿನಾಂಕ: 13-01-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 20-09-2019ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 01-02-2019 ರಂತೆ ಅನುಮೋದಿಸಿದ್ದ, "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆ"ಯನ್ನು ರದ್ದುಪಡಿಸಿ ಪರ್ಯಾಯವಾಗಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಲಾಗಿದ್ದು, ಸದರಿ ಆದೇಶದ ಅನುಬಂಧ-6ರ ಕ್ರಮ ಸಂಖ್ಯೆ: 53ರ ಕಾಮಗಾರಿಗೆ ರೂ.50.00 ಲಕ್ಷಗಳ ಅನುದಾನವನ್ನು ನಿಗಧಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 15-12-2021ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪ್ರದೇಶಗಳಲ್ಲಿ ಮೂಲಭೂತ ಸೌಕಾರ್ಯಗಳ ಅಭಿವೃದ್ಧಿಗಾಗಿ ಮಾನ್ಯ ಮುಖ್ಯ ಮಂತ್ರಿಗಳ ನವನಗರೋತ್ಥಾನ ಯೋಜನೆಯಡಿಯಲ್ಲಿ ರೂ.8015.37 ಕೋಟಿಗಳ ಅನುದಾನ ಮೀಸಲಿಟ್ಟಿದ್ದು, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂ.ಎನ್,ವೈ 2018 ಬೆಂಗಳೂರು ದಿನಾಂಕ: 20-09-2019 ರಲ್ಲಿ ಅನುಬಂಧ-6ರಲ್ಲಿ ಈ ಮೇಲ್ಕಂಡ ಕಾಮಗಾರಿಗೆ ಅನುಮೋದನೆ ನೀಡಿರುತ್ತಾರೆ.

"Construction of Convention Hall infront of Rangamandira At Attur layout in ward no-03" ಕಾಮಗಾರಿಗೆ ದಿನಾಂಕ: 11-08-2021 ರಂದು ದ್ವಿ-ಲಕೋಟೆ E-Procurement ಪದ್ಧತಿಯಲ್ಲಿ ರೂ.50.00 ಲಕ್ಷಗಳಿಗೆ ಕಾಮಗಾರಿ ಟೆಂಡರ್ ಪ್ರಕಟಣೆ ಸಂಖ್ಯೆ: BBMP/EE/YNK.D/E-PMT/05/2021-22, dated: 11-08-2021 ರಂತೆ ದ್ವಿಲಕೋಟೆ ಇ-ಪ್ರೊಕ್ಯೂರ್‌ಮೆಂಟ್ ಪದ್ಧತಿಯಂತೆ ರೂ.46.25 ಲಕ್ಷಗಳಿಗೆ (ಟೆಂಡರ್‌ಗಿಟ್ಟ ಮೊತ್ತ) ಟೆಂಡರ್ ಆಹ್ವಾನಿಸಲಾಗಿರುತ್ತದೆ. ಸದರಿ ಕಾಮಗಾರಿಯ ತಾಂತ್ರಿಕ ಬಿಡ್‌ನ್ನು ದಿನಾಂಕ: 02-09-2021 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಮೂರು ಜನ ಬಿಡ್‌ದಾರರು ಭಾಗವಹಿಸಿದ್ದು, ವಿವರ ಕೆಳಕಂಡಂತಿರುತ್ತದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

. . .2/-

ಕ್ರ ಸಂ	ಕಾಮಗಾರಿಯ/ ಯೋಜನೆಯ ಹೆಸರು	ಅಂದಾಜು ಮೊತ್ತರೂ. (ಲಕ್ಷಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ ರೂ. (ಲಕ್ಷಗಳಲ್ಲಿ)	ಟೆಂಡರ್‌ನಲ್ಲಿ ಭಾಗವಹಿಸಿರುವ ಗುತ್ತಿಗೆದಾರರು	ಷರಾ
1	Construction of Convention Hall infront of Rangamandira At Attur layout in ward no - 03	50.00	44.25	Sri. R Ranganath	Technically Qualified
				Sri venkatesh N (Sreshta Constructions)	Technically Qualified
				Sri Manoj Naik B M	Technically Dis-Qualified

ಬಿಡ್‌ದಾರರಾದ 1) Sri. R Ranganath 2) Sri Venkatesh N (Sreshta Constructions) ರವರು ತಾಂತ್ರಿಕವಾಗಿ ಅರ್ಹತೆ ಹೊಂದಿರುವುದರಿಂದ ದಿನಾಂಕ: 06-11-2021 ರಂದು ಮುಖ್ಯ ಅಯುಕ್ತರ ಅಧ್ಯಕ್ಷತೆಯಲ್ಲಿರುವ ತಾಂತ್ರಿಕ ಮೌಲ್ಯಮಾಪನ ಸಮಿತಿಯು ತಾಂತ್ರಿಕ ಬಿಡ್‌ಗೆ ಅನುಮೋದನೆ ಹಾಗೂ ಆರ್ಥಿಕ ಬಿಡ್‌ನ್ನು ತೆರೆಯಲು ಅನುಮೋದನೆ ನೀಡಿರುವಂತೆ ದಿನಾಂಕ: 15-11-2021 ರಂದು ಆರ್ಥಿಕ ಬಿಡ್‌ಅನ್ನು ತೆರೆಯಲಾಗಿದ್ದು, ವಿವರ ಈ ಕೆಳಕಂಡಂತಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

ಕ್ರ. ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ 2018-19 ರ ಅನುಮೋದಿತ ದರಗಳಿಗೆ ಹೊಲಿಸಿದಾಗ.	ಟೆಂಡರ್‌ಗಿಟ್ಟ ಮೊತ್ತ 02-11-2021 ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ	ಗುತ್ತಿಗೆದಾರರು ನಮೂದಿಸಿರುವ ದರಗಳು	2018-19ನೇ ಸಾಲಿನ ಎಸ್.ಆರ್ ದರಗಳಿಗೆ ಹೋಲಿಸಿದಾಗ ಶೇಕಡವಾರು	ದಿನಾಂಕ: 02-11-2021 ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡವಾರು
01	Sri. R Ranganath	44,25,647.78	45,52,090.72	46,44,662.80	(+) 4.95%	(+)2.03% ಎಲ್-1
02	Sri Venkatesh N (Sreshta Constructions)			46,91,193.38	(+) 6.00%	(+) 3.05% ಎಲ್-2

ಮೇಲ್ಕಂಡ ಕಾಮಗಾರಿಯ ಟೆಂಡರ್‌ನಲ್ಲಿ ಗುತ್ತಿಗೆದಾರರಾದ Sri R Ranganath ರವರು ರೂ.46,44,662.80 ಗಳ ಕನಿಷ್ಟ ದರ ನಮೂದಿಸಿರುತ್ತಾರೆ. ಈ ಮೊತ್ತವನ್ನು ಕರ್ನಾಟಕ ಲೋಕೋಪಯೋಗಿ ಇಲಾಖೆಯ 2018-19ನೇ ಸಾಲಿನ ದರಪಟ್ಟಿಯ ದರಗಳಿಗೆ ಹೋಲಿಸಿದಾಗ ಶೇ.4.95% ಹೆಚ್ಚು ಇದ್ದು, ಹಾಗೂ ದಿನಾಂಕ: 02-11-2021 ರಂದು ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇ (+) 2.03% ರಷ್ಟು ಹೆಚ್ಚಾಗಿರುತ್ತದೆ. ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿರುವ ಎಲ್-1 ಗುತ್ತಿಗೆದಾರರೊಂದಿಗೆ ದರ ಸಂಧಾನ ನಡೆಸಿದ್ದು, ವಿವರ ಈ ಕೆಳಕಂಡಂತಿರುತ್ತದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

. . .3/-

	BEFORE NEGOTIATION				AFTER NEGOTIATION		
ಕ್ರ ಸಂ	ತಾಂತ್ರಿಕ ಮೌಲ್ಯ ಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಗುತ್ತಿಗೆದಾರರು ನಮೂದಿಸಿರುವ ದರಗಳು	2018–19ನೇ ಸಾಲಿನ ಎಸ್.ಆರ್ ದರಗಳಿಗೆ ಹೋಲಿಸಿದಾಗ ಶೇಕಡವಾರು	ದಿನಾಂಕ: 02–11–2021 ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡವಾರು	ದರ ಸಂದಾನದ ನಂತರ ಗುತ್ತಿಗೆದಾರರು ನಮೂದಿಸಿರುವ ಮೊತ್ತ	2018–19ನೇ ಸಾಲಿನ ಎಸ್.ಆರ್ ದರಗಳಿಗೆ ಹೋಲಿಸಿದಾಗ ಶೇಕಡವಾರು	ದಿನಾಂಕ: 02–11–2021 ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡವಾರು
01	Sri. R Ranganath	46,44,662.80	(+) 4.95%	(+)2.03%	46,40,291.69	(+) 4.85%	(+)1.93%

ಮೇಲ್ಕಂಡ ವಿವರಗಳಂತೆ ಎಲ್–1 ಗುತ್ತಿಗೆದಾರರೊಂದಿಗೆ ದರ ಸಂಧಾನ ನಡೆಸಿದ ನಂತರದ ಮೊತ್ತವು ರೂ.46,40,291.69 ಗಳಾಗಿದ್ದು, ಈ ಮೊತ್ತವನ್ನು ಕರ್ನಾಟಕ ಲೋಕೋಪಯೋಗಿ ಇಲಾಖೆಯ 2018–19ನೇ ಸಾಲಿನ ದರಪಟ್ಟಿಯ ದರಗಳಿಗೆ ಹೋಲಿಸಿದಾಗ ಶೇ.4.85% ಹೆಚ್ಚುವರಿಯಾಗಿರುತ್ತದೆ. ಹಾಗೂ ದಿನಾಂಕ: 02–11–2021 ರಂದು ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇ 1.93% ರಷ್ಟು ಹೆಚ್ಚಾಗಿರುತ್ತದೆ. "ಸದರಿ ಕಾಮಗಾರಿಯ ಅಂದಾಜು ಮೊತ್ತವು ರೂ.50.00 ಲಕ್ಷಗಳಾಗಿದ್ದು, ಯಲಹಂಕ ವಿಭಾಗಕ್ಕೆ ಮಾನ್ಯ ಮುಖ್ಯಮಂತ್ರಿಗಳ ನವನಗರೋತ್ಥಾನ ಯೋಜನೆಯಡಿಯಲ್ಲಿ ಮಂಜೂರಾಗಿರುವ ಕ್ರಿಯಾ ಯೋಜನೆಯಲ್ಲಿ ರೂ.50.00 ಲಕ್ಷ ಹಾಗೂ ಇದಕ್ಕಿಂತ ಕಡಿಮೆ ಮೊತ್ತ ಇರುವ ಏಕೈಕ ಕಾಮಗಾರಿಯಾಗಿದ್ದು, ಸದರಿ ಕಾಮಗಾರಿಯನ್ನು "ರ್‍ಯಾಂಡಮೈಷನ್"ಗೆ ಒಳಪಡಿಸಿದಾಗ ಪರಿಶಿಷ್ಟ ಜಾತಿಗೆ ಮೀಸಲಿಡಿಸಬೇಕಾಗಿರುತ್ತದೆ. ಆದುದರಿಂದ, ಈ ಕಾಮಗಾರಿಯನ್ನು ಉಳಿದ ಪ್ಯಾಕೇಜ್‌ವಾರು ಕಾಮಗಾರಿಗಳಲ್ಲಿ ವಿಲೀನಗೊಳಿಸಲು ಸಾಧ್ಯವಾಗಿರುವುದಿಲ್ಲ. ಆದುದರಿಂದ ಪ್ರತ್ಯೇಕವಾಗಿ ಟೆಂಡರ್ ಆಹ್ವಾನಿಸಲಾಗಿರುತ್ತದೆ" ಎಂದು ಬಿಬಿಎಂಪಿ ಮುಖ್ಯ ಆಯುಕ್ತರು ಸ್ಪಷ್ಟೀಕರಣ ನೀಡಿರುತ್ತಾರೆ.

ಆದುದರಿಂದ, ದಿನಾಂಕ: 02–12–2021 ರಂದು ನಡೆದ ಆರ್ಥಿಕ ಮೌಲ್ಯಮಾಪನ ಮತ್ತು ದರ ಸಂಧಾನ ಸಮಿತಿ ಸಭೆಯಲ್ಲಿ ರೂ.46,40,291.69 ಗಳಿಗೆ ಟೆಂಡರ್ ಅನುಮೋದಿಸಲು ಶಿಫಾರಸ್ಸು ಮಾಡಲಾಗಿರುತ್ತದೆ. ಆದುದರಿಂದ ಮೇಲ್ಕಂಡ ಕಾಮಗಾರಿಯನ್ನು ವಾರ್ಡ್ ನಂ–03ರ ವ್ಯಾಪ್ತಿಯಲ್ಲಿ ಕೈಗೊಂಡು ನಿರ್ವಹಿಸಬೇಕಾಗಿರುವುದರಿಂದ ರೂ.50.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಕಡಿಮೆ ಮೊತ್ತ ನಮೂದಿಸಿರುವ ಬಿಡ್‌ದಾರರಾದ Sri R. Ranganath ರವರ ಟೆಂಡರ್‌ನ ಮೊತ್ತ ರೂ.46,40,291.69 ಗಳಿಗೆ (ಶೇ.4.85% ರಷ್ಟು ಹೆಚ್ಚು) ಟೆಂಡರ್ ಅನುಮೋದನೆ ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 13–01–2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರ ದಿನಾಂಕ: 15–12–2021ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

. . .4/–

"ವಿವರವಾದ ಚರ್ಚೆಯ ನಂತರ Construction of Convention Hall in front of Rangamandhira at Attur layout in ward no - 03 ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, R. Ranganath ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.44,25,647.78 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ.44,69,904/- ಗಳಿಗೆ ಮಿತಿಗೊಳಿಸಿ ಅನುಮೋದಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು".

ದಿನಾಂಕ: 13-01-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 421 ಎಂಎನ್‌ವೈ 2021 (ಇ),
ಬೆಂಗಳೂರು, ದಿನಾಂಕ: 08-04-2022.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರಲ್ಲಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಯ ಅನುಬಂಧ-6ರ ಕ್ರಮ ಸಂಖ್ಯೆ: 53ರ ಕಾಮಗಾರಿಯನ್ನೊಳಗೊಂಡು ಮಾಡಲಾಗಿರುವ "Construction of Convention Hall in front of Rangamandhira at Attur layout in ward no - 03" ಪ್ಯಾಕೇಜಿನ ರೂ.50.00 ಲಕ್ಷಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 13-01-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ, R. Ranganath ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.44,25,647.78 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ.44,69,904-00 (ನಲವತ್ತ ನಾಲ್ಕು ಲಕ್ಷದ ಅರವತ್ತೊಂಭತ್ತು ಸಾವಿರದ ಒಂಬೈನೂರ ನಾಲ್ಕು ರೂಪಾಯಿಗಳು ಮಾತ್ರ) ಗಳಿಗೆ ಮಿತಿಗೊಳಿಸಿ ಟೆಂಡರ್‌ಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.
2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿರುವುದನ್ನು ಬಿಬಿಎಂಪಿ ಮುಖ್ಯ ಆಯುಕ್ತರು ಖಚಿತಪಡಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅನುದಾನದಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

. . .5/-

6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ದಿನಾಂಕ: 13-01-2022ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಮುಖ್ಯ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್(ಕೆ))
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.